# 2 ಹಂತದಲ್ಲಿ ಗ್ರಾಪಂ ಚುನಾವಣೆ ಅಧಿಕೃತ

## ಯಾವ ತಾಲೂಕಲ್ಲಿ ಯಾವಾಗ ಮತದಾನ? | ಮಾಹಿತಿ ನೀಡಲು ಆಯೋಗ ಸೂಚನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆಯನ್ನು 2 ಹಂತದಲ್ಲಿ ನಡೆಸಲು ರಾಜ್ಯ ಚುನಾವಣಾ ಆಯೋಗವು ತೀರ್ಮಾನಿಸಿರುವುದು ಇದೀಗ ಅಧಿಕೃತವಾಗಿದೆ. ರಾಜ್ಯದ ಎಲ್ಲಾ ಜಿಲ್ಲಾಡಳಿತಗಳಿಗೆ ಬುಧವಾರ ಈ ಬಗ್ಗೆ ನಿರ್ದೇಶನವೊಂದನ್ನು ನೀಡಿರುವ ಚುನಾವಣಾ ಆಯೋಗ, 2 ಹಂತದ ಚುನಾವಣೆ ನಡೆಸಲು ಅನುವಾಗುವಂತೆ ಯಾವ ಹಂತದಲ್ಲಿ ಯಾವ ತಾಲೂಕುಗಳಿಗೆ ಚುನಾವಣೆ ನಡೆಸಬೇಕು ಎಂಬ ಮಾಹಿತಿ ನೀಡುವಂತೆ ಸೂಚಿಸಿದೆ. ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಕೋವಿಡ್ ನಿರ್ವಹಣೆಯಲ್ಲಿ ಬಹುತೇಕ ಸಿಬ್ಬಂದಿ ತೊಡಗಿಕೊಂಡಿದ್ದಾರೆ. ಹೀಗಾಗಿ ಲಭ್ಯ ಇರುವ ಪೊಲೀಸ್ ಅಧಿಕಾರಿ/ಸಿಬ್ಬಂದಿ ಮತ್ತು ಮತದಾನ ಸಿಬ್ಬಂದಿಯನ್ನು ಬಳಸಿಕೊಳ್ಳಬೇಕಾಗಿದೆ. ಆದ್ದರಿಂದ ಗ್ರಾಮ ಪಂಚಾಯತಿ ಚುನಾವಣೆಯನ್ನು ಎರಡು ಹಂತದಲ್ಲಿ ನಡೆಸಲು ಉದ್ದೇಶಿಸಲಾಗಿದೆ ಎಂದು ಆಯೋಗವು ತಿಳಿಸಿದೆ.

↘ 9

**ಎಲ್ಲರಿಗಿಂತ ಮೊದಲೇ ತಿಳಿಯುವುದು ಇಲ್ಲೇ**

2 ಹಂತಗಳಲ್ಲಿ ಗ್ರಾಪಂ ಚುನಾವಣೆ ನಡೆಯುವ ಬಗ್ಗೆ ಕನ್ನಡಪ್ರಭ ನಿನ್ನೆಯೇ ವರದಿ ಮಾಡಿತ್ತು.




# 2 ಹಂತದಲ್ಲಿ ಗ್ರಾಪಂ ಚುನಾವಣೆ

↙ ಮೊದಲ ಪುಟದಿಂದ

ಎರಡು ಹಂತದಲ್ಲಿ ಚುನಾವಣೆ ನಡೆಸುವ ಸಂಬಂಧ ಚುನಾವಣಾ ಆಯೋಗ ಆಯುಕ್ತ ಬಿ.ಬಸವರಾಜು ಅವರು ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿ, ಪೊಲೀಸ್ ವರಿಷ್ಠಾಧಿಕಾರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿದ್ದರು. ಈ ವೇಳೆ ಹೆಚ್ಚಿನ ಜಿಲ್ಲಾಧಿಕಾರಿಗಳು ತಾಲೂಕುವಾರು ಎರಡು ಹಂತದಲ್ಲಿ ಚುನಾವಣೆ ನಡೆಸಿದರೆ ಅನುಕೂಲವಾಗುವುದು ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಹೀಗಾಗಿ ಎರಡು ಹಂತದಲ್ಲಿ ಚುನಾವಣೆ ನಡೆಸಲು ತೀರ್ಮಾನಿಸಲಾಗಿದೆ. ಆದ್ದರಿಂದ ತಮ್ಮ ಜಿಲ್ಲೆಯಲ್ಲಿ ಮೊದಲನೇ ಹಂತದಲ್ಲಿ ಮತ್ತು ಎರಡನೇ ಹಂತದಲ್ಲಿ ಯಾವ ಯಾವ ತಾಲೂಕುಗಳಿಗೆ ಚುನಾವಣೆ ನಡೆಸಿದರೆ ಅನುಕೂಲ ಎಂಬ ಮಾಹಿತಿಯನ್ನು ಇ-ಮೇಲ್ ಅಥವಾ ಜಿಲ್ಲಾಡಳಿತಗಳಿಗೆ ನೀಡಿರುವ ನಮೂನೆಯಲ್ಲಿ ತಿಳಿಸಬೇಕು ಎಂದು ಆಯೋಗ ನಿರ್ದೇಶಿಸಿದೆ.